# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1060 |
| 2. | ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) |
| 3. | ಉತ್ತರಿಸುವ ದಿನಾಂಕ | : | 12.03.2026 |
| 4. | ಉತ್ತರಿಸುವ ಸಚಿವರು | : | ಗೃಹ ಸಚಿವರು. |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ದುಬೈ, ಥಾಯ್ಲೆಂಡ್, ದಕ್ಷಿಣ ಆಫ್ರಿಕಾ, ನೈಜೀರಿಯಾ ಮುಂತಾದ ವಿದೇಶಗಳಲ್ಲಿ ಕಡಿಮೆ ಬೆಲೆಗೆ ದೊರೆಯುವ ಡ್ರಗ್ಸ್ ರಫ್ತು ಮಾಡಿಕೊಂಡು ಬೆಂಗಳೂರು ನಗರದಲ್ಲಿ ಮಾರಾಟ ಮಾಡುತ್ತಿರುವ ಪ್ರಕರಣಗಳು ವರದಿಯಾಗಿದ್ದು, ಹಲವಾರು ವಿದೇಶಿ ಡ್ರಗ್ಸ್ ಪೆಡ್ಲರ್ಸ್ ಗಳು ಈ ರೀತಿ ಡ್ರಗ್ಸ್ ಮಾರಾಟ ದಂಧೆಯಲ್ಲಿ ನಿರಂತರವಾಗಿ ಭಾಗಿಯಾಗುತ್ತಾ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಗಮನಕ್ಕೆ ಬಂದಿರುತ್ತದೆ.</td></tr>
<tr><td>(ಆ)</td><td>ಬಂದಿದ್ದಲ್ಲಿ, ವಿದೇಶಗಳಲ್ಲಿ ಕಡಿಮೆ ಬೆಲೆಗೆ ದೊರೆಯುವ ಡ್ರಗ್ಸ್ ರಫ್ತು ಮಾಡಿಕೊಂಡು ಬೆಂಗಳೂರು ನಗರದಲ್ಲಿ ಸಾರ್ವಜನಿಕರಿಗೆ, ಐಟಿ ಕಂಪನಿಯ ಉದ್ಯೋಗಿಗಳಿಗೆ, ಕಾಲೇಜು ವಿದ್ಯಾರ್ಥಿಗಳಿಗೆ ಹಾಗೂ ಹೋಟೆಲ್ ಮತ್ತು ಪಬ್ ಗಳಿಗೆ ಹೆಚ್ಚಿನ ಬೆಲೆಗೆ ಅಕ್ರಮವಾಗಿ ಮಾರಾಟ ಮಾಡುತ್ತಿದ್ದು, ಸದರಿ ಪ್ರಕರಣಗಳಲ್ಲಿ ಡ್ರಗ್ಸ್ ಪೆಡ್ಲರ್ಸ್ ಗಳು ಬಹು ವ್ಯವಸ್ಥಿತವಾಗಿ ಮತ್ತು ಹೈಟೆಕ್ ಮಾದರಿಯಲ್ಲಿ ತಮ್ಮ ಜಾಲ ಹೆಣೆದಿರುವುದು ಕಂಡುಬಂದಿದ್ದು, ಸರ್ಕಾರ ಅತ್ಯಂತ ಕಠಿಣ ಕಾನೂನು ಕ್ರಮಗಳನ್ನು ಅಂತಹವರ ವಿರುದ್ಧ ಜರುಗಿಸಲು ಈಗಾಗಲೇ ಅಗತ್ಯ ಕ್ರಮ ವಹಿಸಿದೆಯೇ; (ವಿವರ ನೀಡುವುದು)</td><td>ಮಾದಕ ದ್ರವ್ಯ ಮಾರಾಟಗಾರರು ಹಾಗೂ ವ್ಯಸನಿಗಳ ವಿರುದ್ಧ ಕಾನೂನು ಕ್ರಮ ಜರುಗಿಸಲಾಗಿದೆ. ಕಳೆದ 03 ವರ್ಷಗಳಲ್ಲಿ ಎನ್.ಡಿ.ಪಿ.ಎಸ್ ಕಾಯ್ದೆ-1985ರಡಿ ದಾಖಲಾದ ಪ್ರಕರಣಗಳ ವಿವರ ಈ ಕೆಳಕಂಡಂತಿದೆ:-<br>
<table>
<tr><th>ವರ್ಷ</th><th>ದಾಖಲಾದ ಪ್ರಕರಣಗಳ ಸಂಖ್ಯೆ</th><th>ಬಂಧಿಸಲಾದ ವ್ಯಸನಿಗಳ ಸಂಖ್ಯೆ</th><th>ಬಂಧಿಸಲಾದ ಮಾರಾಟಗಾರರ ಸಂಖ್ಯೆ</th></tr>
<tr><td>2023</td><td>3529</td><td>3497</td><td>1021</td></tr>
<tr><td>2024</td><td>530</td><td>53</td><td>701</td></tr>
<tr><td>2025</td><td>1401</td><td>1209</td><td>718</td></tr>
<tr><td>2026 (28.02.2026)</td><td>1282</td><td>1463</td><td>272</td></tr>
</table>
ಸರ್ಕಾರ ಕೈಗೊಂಡಿರುವ ಕ್ರಮಗಳ ವಿವರ ಈ ಕೆಳಕಂಡಂತಿದೆ:-<br>
• ಎ.ಎನ್.ಟಿ.ಎಫ್. ಘಟಕಗಳನ್ನು ಆರಂಭಿಸಲಾಗಿದೆ.<br>
• ಮಾದಕ ಜಾಲದಲ್ಲಿ ಭಾಗಿಯಾದವರ ಬದಲಾವಣೆಗಾಗಿ ಸನ್ಮಿತ್ರ ಯೋಜನೆಯನ್ನು ಅಳವಡಿಸಿಕೊಳ್ಳಲಾಗಿದೆ.<br>
• ಪ್ರತಿ ಮಾಹೆಯ ಅಂತ್ಯದಲ್ಲಿ ಮಾದಕ ವಸ್ತುಗಳ ಬಳಕೆಯ ದುಷ್ಪರಿಣಾಮಗಳ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗುತ್ತಿದೆ.<br>
• ಪ್ರತಿ ವರ್ಷ ಜೂನ್-26 ರಂದು ಮಾದಕ ವಸ್ತುಗಳ ನಿಗ್ರಹ ದಿನವನ್ನು ಆಚರಣೆ ಮಾಡಿ ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗುತ್ತಿದೆ.</td></tr>
</table>

(ಇ) ಕಳೆದ ಮೂರು ವರ್ಷಗಳಲ್ಲಿ ಡ್ರಗ್ಸ್ ಮಾರಾಟ ದಂಧೆಯಲ್ಲಿ ತೊಡಗಿರುವ ಎಷ್ಟು ಜನ ವಿದೇಶಿ ಡ್ರಗ್ಸ್ ಪೆಡ್ಲರ್ಸ್‌ಗಳ ವಿರುದ್ಧ ಪ್ರಕರಣಗಳು ದಾಖಲಾಗಿವೆ ಹಾಗೂ ಅವರ ವಿರುದ್ಧ ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು;

ಕಳೆದ 03 ವರ್ಷಗಳಲ್ಲಿ ಡ್ರಗ್ಸ್ ಮಾರಾಟ ದಂಧೆಯಲ್ಲಿ ತೊಡಗಿರುವ ವಿದೇಶಿ ಡ್ರಗ್ಸ್ ಪೆಡ್ಲರ್ಸ್ ಗಳ ವಿರುದ್ಧ ದಾಖಲಾದ ಪ್ರಕರಣಗಳ ವಿವರ ಈ ಕೆಳಕಂಡಂತಿದೆ:-

| ವರ್ಷ | ಎನ್.ಡಿ.ಪಿ.ಎಸ್ ಕಾಯ್ದೆಯಡಿಯಲ್ಲಿ ದಾಖಲಾದ ಪ್ರಕರಣಗಳ ಸಂಖ್ಯೆ | ಎನ್.ಡಿ.ಪಿ.ಎಸ್ ಕಾಯ್ದೆಯಡಿಯಲ್ಲಿ ಬಂಧಿಸಲಾದ ವಿದೇಶಿಗರ ಸಂಖ್ಯೆ |
|---|---|---|
| 2023 | 83 | 101 |
| 2024 | 43 | 61 |
| 2025 | 46 | 60 |
| 2026 (28.02.2026) | 9 | 13 |

ಸರ್ಕಾರ ಕೈಗೊಂಡಿರುವ ಕ್ರಮಗಳ ವಿವರ ಈ ಕೆಳಕಂಡಂತಿದೆ:-

- ಅಕ್ರಮವಾಗಿ ನೆಲೆಸಿರುವ ವಿದೇಶಿಗರನ್ನು ಪತ್ತೆ ಮಾಡಿ ಎಫ್.ಆರ್.ಓ ರವರ ಮೂಲಕ ಅವರ ದೇಶಗಳಿಗೆ ವಾಪಸ್ ಕಳುಹಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತಿದೆ.

- ನಗರಕ್ಕೆ ಮಾದಕ ವಸ್ತುಗಳು (ಗಾಂಜಾ) ಸರಬರಾಜಾಗುವ ಮಾರ್ಗಗಳ ಮೇಲೆ ತೀವ್ರ ನಿಗಾವಣೆ ಇಟ್ಟು ಕಟ್ಟುನಿಟ್ಟಾದ ಕಾನೂನು ಕ್ರಮಗಳನ್ನು ಜರುಗಿಸಲಾಗುತ್ತಿದೆ. Bitcoin ಬಳಸಿ Darknet ಮುಖಾಂತರ ಡ್ರಗ್ಸ್ ಸರಬರಾಜು ಜಾಲವನ್ನು ಪತ್ತೆ ಮಾಡಿ ಕಾನೂನು ಕ್ರಮ ಕೈಗೊಳ್ಳಲಾಗಿರುತ್ತದೆ. ಅಲ್ಲದೆ ವಿದೇಶಗಳಿಂದ ಪೋಸ್ಟಲ್/ ಕೊರಿಯರ್ಸ್ ಮುಖಾಂತರ ನಗರಕ್ಕೆ ಡ್ರಗ್ಸ್ ಸರಬರಾಜು ಮಾಡುತ್ತಿದ್ದ ಜಾಲವನ್ನು ಸಹ ಭೇದಿಸಲಾಗಿದೆ.

- ನಗರದಲ್ಲಿ ಡ್ರಗ್ಸ್ ಅಕ್ರಮಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ಸಲುವಾಗಿ NCB, DRI, Customs, Railway, Education ಇಲಾಖೆಗಳ ಅಧಿಕಾರಿಗಳ ಸಮನ್ವಯ ಸಭೆಯನ್ನು ನಡೆಸಲಾಗಿದೆ.

- ಮಾದಕ ವಸ್ತುಗಳ ಮಾರಾಟ/ ಸೇವನೆಯ ಪ್ರಕರಣಗಳಲ್ಲಿ ವಿದೇಶಿ ಆರೋಪಿಗಳಿಗೆ ಯಾವ ಮೂಲಗಳಿಂದ ಮಾದಕವಸ್ತುಗಳು ಸರಬರಾಜಾಗುತ್ತಿರುವ ಬಗ್ಗೆ ಸಂಪೂರ್ಣ ಮಾಹಿತಿ ಸಂಗ್ರಹಿಸಲು ಸೂಚಿಸಲಾಗಿದ್ದು, ಇಂತಹ ಕೃತ್ಯಗಳಲ್ಲಿ ತೊಡಗಿರುವ ವಿದೇಶಿಯರನ್ನು ದಸ್ತಗಿರಿ ಮಾಡಿ ಅವರುಗಳ ಪಾಸ್ ಪೋರ್ಟ್‌ಗಳನ್ನು ಮುಟ್ಟುಗೋಲು ಹಾಕಿಕೊಂಡು ಕಾನೂನಿನ ಕ್ರಮ ಕೈಗೊಳ್ಳಲಾಗುತ್ತಿದೆ. ವಿದೇಶಿಯರ ವಾಸದ ಬಗ್ಗೆ ಮಾಹಿತಿಯನ್ನು ಸಂಬಂಧಪಟ್ಟ ಪೊಲೀಸ್ ಠಾಣೆಗಳಿಗೆ ಒದಗಿಸುವಂತೆ ಈಗಾಗಲೇ ಸುತ್ತೋಲೆಗಳನ್ನು ಹೊರಡಿಸಲಾಗಿದೆ. ವಿಶೇಷ ಕಾರ್ಯಾಚರಣೆಗಳನ್ನು ನಡೆಸಿ ಇಂತಹ ಕೃತ್ಯವೆಸಗುವಂತಹವರ ವಿರುದ್ಧ ಕಠಿಣ

| | | |
|---|---|---|
| | | ಕಾನೂನಿನ ಕ್ರಮ ಕೈಗೊಳ್ಳಲಾಗುತ್ತಿದೆ.<br><br>➢ ವಿದೇಶಿಯರಿಂದ ಮಾದಕವಸ್ತುಗಳ ಅಕ್ರಮ ಸಾಗಾಣಿಕೆ ಮತ್ತು ಮಾರಾಟ ತಡೆಗಟ್ಟುವ ಸಲುವಾಗಿ, ಠಾಣಾ ಮಟ್ಟದಲ್ಲಿ ಗೌಪ್ಯ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ. ಮಾದಕದ್ರವ್ಯ (ಡ್ರಗ್ಸ್) ಹಾವಳಿಯನ್ನು ತಡೆಗಟ್ಟಲು ಸೂಕ್ತ ನಿಗಾವಹಿಸಿ ಮಾದಕ ದ್ರವ್ಯಗಳ ಮಾರಾಟ ಮತ್ತು ಸೇವಿಸುವವರ ಬಗ್ಗೆ ಮಾಹಿತಿ ಸಂಗ್ರಹಿಸಲಾಗುತ್ತಿದೆ. ಈ ಬಗ್ಗೆ ಬಾತ್ಮಿದಾರರಿಗೂ ಸಹ ಮಾಹಿತಿಯನ್ನು ನೀಡುವಂತೆ ಸೂಚಿಸಲಾಗಿದೆ. ಅಧಿಕಾರಿ / ಸಿಬ್ಬಂದಿಗಳಿಗೆ ಮಾದಕ ದ್ರವ್ಯಗಳ ಮಾರಾಟ ಮತ್ತು ಸೇವಿಸುವವರ ಬಗ್ಗೆ ಮಾಹಿತಿ ಸಂಗ್ರಹಿಸುವಂತೆ, ಸೂಕ್ತ ತಿಳುವಳಿಕೆ ನೀಡಿ ಕರ್ತವ್ಯಕ್ಕೆ ನೇಮಕ ಮಾಡಲಾಗುತ್ತಿದೆ.<br><br>➢ ಬಾರ್ ಮತ್ತು ರೆಸ್ಟೋರೆಂಟ್, ಕಾಫಿ-ಡೇ, ಪಬ್, ಡ್ಯಾನ್ಸ್ ಬಾರ್ ಮುಂತಾದ ವಿದೇಶಿಯರು ಹೆಚ್ಚಾಗಿ ಸೇರುವ ಸ್ಥಳಗಳು, ಶಾಲಾ-ಕಾಲೇಜು ಆವರಣ, ಬಸ್ ನಿಲ್ದಾಣ ಹಾಗು ಇನ್ನಿತರೆ ಪ್ರದೇಶಗಳಲ್ಲಿ ಮಾದಕ ದ್ರವ್ಯ ವಸ್ತುಗಳನ್ನು ಮಾರಾಟ ಮಾಡುತ್ತಿರುವ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ ಕಾನೂನು ಕ್ರಮ ಜರುಗಿಸಲಾಗುತ್ತಿದೆ. ಸಾರ್ವಜನಿಕರ ಗಮನ ಸೆಳೆಯಲು ಜನಸಂದಣಿ ಇರುವ ಸ್ಥಳಗಳಲ್ಲಿ ಬ್ಯಾನರ್, ಪೋಸ್ಟರ್ ಗಳನ್ನು ಪ್ರದರ್ಶಿಸಿ ಕರಪತ್ರ ಹಂಚಲಾಗುತ್ತಿದೆ. ಸಾಕ್ಷ್ಯ ಕಿರು ಚಿತ್ರಗಳ ಮೂಲಕ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ.<br><br>➢ ಠಾಣಾ ಸರಹದ್ದುಗಳಲ್ಲಿ ಹೊಯ್ಸಳ, ಚೀತಾ ಅಧಿಕಾರಿ ಮತ್ತು ಸಿಬ್ಬಂದಿಗಳು ಗಸ್ತಿನಲ್ಲಿರುವ ಸಮಯದಲ್ಲಿ ಶಾಲಾ- ಕಾಲೇಜುಗಳ ಬಳಿ ಸೂಕ್ಷವಾಗಿ ಗಮನಿಸಿ ವಿದೇಶಿ ವ್ಯಕ್ತಿಗಳ ಮಾಹಿತಿ ಸಂಗ್ರಹಿಸುವಂತೆ ಸೂಚಿಸಲಾಗಿದೆ. ಮಾದಕ ದ್ರವ್ಯ ಪದಾರ್ಥಗಳ ವಹಿವಾಟನ್ನು ತಡೆಗಟ್ಟಲು ಹಾಗೂ ಪತ್ತೆ ಮಾಡಲು ಮತ್ತು ಹದಿಯರೆಯದ ಯುವಕ ಮತ್ತು ಯುವತಿಯರನ್ನು ಇಂತಹ ದುಶ್ಚಟಗಳಿಂದ ನಿಯಂತ್ರಿಸುವ ಸಲುವಾಗಿ ಎಲ್ಲಾ ರೀತಿಯ ಸಾಧ್ಯವಿರುವ ಪ್ರಯತ್ನಗಳನ್ನು ಮಾಡಲಾಗುತ್ತಿದೆ.<br><br>➢ ವಿದೇಶಿಯರು ನೆಲೆಸಿರುವ ಪ್ರದೇಶಗಳ ಬಳಿ ಸೂಕ್ಷ್ಮ ನಿಗಾವಣೆಯನ್ನು ಮಾಡುವುದರೊಂದಿಗೆ ಅವರ ಚಟುವಟಿಕೆಗಳ ಮೇಲೆ ನಿಗಾವಹಿಸಲಾಗುತ್ತಿದೆ.<br><br>➢ ಪದೇ ಪದೇ ಇಂತಹ ಕೃತ್ಯಗಳಲ್ಲಿ ತೊಡಗುವ ವಿದೇಶಿ Drug Pedlers ಗಳ ವಿರುದ್ಧ " Prevention of Illicit Traffic in Narcotics Drugs & Psychotropic Substances " Act-1988 ರಡಿ 2024 ನೇ ಸಾಲಿನಲ್ಲಿ ಇಬ್ಬರು ಮತು 2025 ನೇ ಸಾಲಿನಲ್ಲಿ ಒಬ್ಬ ವಿದೇಶಿ ಪ್ರಜೆ ಮೇಲೆ ಕ್ರಮ ಜರುಗಿಸಲಾಗಿದೆ. |

| | | |
|---|---|---|
| (ಈ) | ನಾಗರಿಕ ಸಮಾಜಕ್ಕೆ ಪಿಡುಗು ಮತ್ತು ಸವಾಲಾಗಿ ಪರಿಣಮಿಸಿರುವ ಈ ಡ್ರಗ್ಸ್ ಪೆಡ್ಲರ್ಸ್‌ಗಳ ವಿರುದ್ಧ ಅತ್ಯಂತ ಕಠಿಣ ಕ್ರಮಗಳನ್ನು ಕೈಗೊಂಡು ದಿನೇದಿನೇ ವಿವಿಧ ಮಾದರಿಯಲ್ಲಿ ವ್ಯಾಪಕವಾಗಿ ಹರಡುತ್ತಿರುವ ಡ್ರಗ್ಸ್ ಜಾಲಕ್ಕೆ ಶಾಶ್ವತವಾಗಿ ಕಡಿವಾಣ ಹಾಕಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು? (ವಿವರ ನೀಡುವುದು) | ➢ ಬೆಂಗಳೂರು ನಗರದ ಎಲ್ಲಾ ಪೊಲೀಸ್ ಠಾಣೆಗಳಲ್ಲಿ ಮಾದಕ ಮುಕ್ತ ರಾಜ್ಯಕ್ಕಾಗಿ ಶಾಲಾ-ಕಾಲೇಜುಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.<br><br>➢ ಪೊಲೀಸ್ ಠಾಣೆಗಳಲ್ಲಿ ಮಾದಕ ವಸ್ತುಗಳ ಮಾರಾಟ ಮತ್ತು ಸಾಗಾಣಿಕೆ ಮಾಡುವವರ ವಿರುದ್ಧ ಪ್ರಕರಣ ದಾಖಲಿಸಿ, ಸೂಕ್ತ ಕಾನೂನು ಕ್ರಮ ಜರುಗಿಸಲಾಗುತ್ತಿದೆ.<br><br>➢ ಮಾದಕ ವಸ್ತುಗಳ ಮಾರಾಟ ಮತ್ತು ಸಾಗಾಣಿಕೆ ಹಾಗೂ ಸೇವನೆ ಮಾಡುವವರ ವಿರುದ್ಧ ಎನ್.ಡಿ.ಪಿ.ಎಸ್. ಕಾಯ್ದೆ 1985 ರಡಿ ಸೂಕ್ತ ಕ್ರಮ ಜರುಗಿಸಲಾಗುತ್ತಿದೆ.<br><br>➢ ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಸಾರ್ವಜನಿಕ ಸಭೆಗಳನ್ನು ಹಮ್ಮಿಕೊಂಡು ಜಾಗೃತಿಯನ್ನು ಮೂಡಿಸಲಾಗುತ್ತಿದೆ. |

ಒಇ 21 ಪಿಎನ್‌ಡಿ 2026

(ಡಾ: ಜಿ . ಪರಮೇಶ್ವರ)
ಗೃಹ ಸಚಿವರು